ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್. /2024 ದಿನಾಂಕ: 04-08-2024

**2024-25ನೇ ಸಾಲಿಗೆ ಕರ್ನಾಟಕದಲ್ಲಿನ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕಾಗಿ ಹಾಗು ಆಯುರ್ವೇದ, ಯುನಾನಿ ಮತ್ತು ಹೋಮಿಯೋಪತಿ ಪದವಿ ಕೋರ್ಸುಗಳಿಗೆ ಹೊಸದಾಗಿ ಅರ್ಜಿ ಸಲ್ಲಿಸುವ ಕುರಿತು**

ಗಮನಿಸಿ: ***ಈಗಾಗಲೇ ಯುಜಿಸಿಇಟಿ-2024 ಕ್ಕೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಯುಜಿನೀಟ್-2024ಕ್ಕೆ ಹೊಸದಾಗಿ ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇಲ್ಲ.***

**ಅಧಿಸೂಚನೆ -2 ಯುಜಿಸಿಇಟಿ-2024ಕ್ಕೆ ನೋಂದಣಿ "ಮಾಡದಿರುವ" ಅಭ್ಯರ್ಥಿಗಳಿಗೆ ಮಾಹಿತಿ**

ಸರ್ಕಾರದ ನಿರ್ದೇಶನದಂತೆ, 2024-25ನೇ ಸಾಲಿಗೆ ವೈದ್ಯಕೀಯ / ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು (ಕಪಪ್ರಾ) UGNEET-2024 ರಲ್ಲಿ ಅರ್ಹತೆಯನ್ನು ಪಡೆದಿರುವ ಹಾಗು ಅರ್ಹತಾ ಮಾನದಂಡಗಳನ್ನು ಪೂರೈಸುವ ಎಲ್ಲಾ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. UGNEET-2024 ರಲ್ಲಿ ನಿಗದಿಪಡಿಸಿರುವ ಕನಿಷ್ಠ ಅಂಕಗಳನ್ನು ಅಥವಾ ಅದಕ್ಕಿಂತ ಹೆಚ್ಚು ಅಂಕಗಳನ್ನು ಪಡೆದಿರುವ ಅಭ್ಯರ್ಥಿಗಳು ಮಾತ್ರ ವೈದ್ಯಕೀಯ / ದಂತ ವೈದ್ಯಕೀಯ / **ಆರ್ಯುವೇದ, ಯುನಾನಿ, ಹೋಮಿಯೋಪತಿ** ಪದವಿ ಕೋರ್ಸುಗಳ ಪ್ರವೇಶಕ್ಕೆ ನೊಂದಣಿ ಮಾಡಿಕೊಳ್ಳಲು ಅರ್ಹರಿರುತ್ತಾರೆ.

SC/ST/OBC ಅರ್ಹತಾ ಮಾನದಂಡಗಳು ಕರ್ನಾಟಕದ SC/ST/OBC ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ.

ಯುಜಿನೀಟ್ 2024 ರಲ್ಲಿ ಅರ್ಹತೆ ಪಡೆದಿರುವ ಆದರೆ ಯುಜಿಸಿಇಟಿ-2024ಕ್ಕೆ ನೊಂದಣಿ ಮಾಡದಿರುವ ಅಭ್ಯರ್ಥಿಗಳು 07-08-2024 - ಬೆ.11.00 ರಿಂದ 09-08-2024 - ರಾತ್ರಿ 11.59 ರವರೆಗೆ ವೈದ್ಯಕೀಯ / ದಂತವೈದ್ಯಕೀಯ / **ಆಯುರ್ವೇದ, ಯುನಾನಿ, ಹೋಮಿಯೋಪತಿ** ಕೋರ್ಸುಗಳ ಪ್ರವೇಶಾತಿಗಾಗಿ ಕೆಇಎ ವೆಬ್‌ಪೋರ್ಟಲ್‌ನಲ್ಲಿ **"ಯುಜಿನೀಟ್-2024 ಹೊಸದಾಗಿ ನೊಂದಣಿ ಮಾಡುವ ಲಿಂಕ್"** ಆಯ್ಕೆ ಮಾಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ನಿಗದಿತ ಶುಲ್ಕವನ್ನು ಪಾವತಿಸಬೇಕು.

ಯಾವ ವರ್ಗದ ಅಭ್ಯರ್ಥಿಗಳು ದಾಖಲೆಗಳ ಪರಿಶೀಲನೆಗೆ ಹಾಜರಾಗಬೇಕು ಎಂದು ನಂತರ ತಿಳಿಸಲಾಗುವುದು. UGNEET-2024 ಮಾಹಿತಿ ಪುಸ್ತಕದಲ್ಲಿ ನೀಡಿರುವ ಶೈಕ್ಷಣಿಕ ಅರ್ಹತೆಗಳನ್ನು ಹಾಗು ಇತರೆ ಮಾನದಂಡಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ಪ್ರಚುರ ಪಡಿಸಲಾಗಿದೆ. ಅಭ್ಯರ್ಥಿಗಳು ವೈದ್ಯಕೀಯ / ದಂತವೈದ್ಯಕೀಯ / **ಆರ್ಯುವೇದ, ಯುನಾನಿ, ಹೋಮಿಯೋಪತಿ** ಕೋರ್ಸುಗಳ ಪ್ರವೇಶಕ್ಕಾಗಿ ನೊಂದಣಿ ಮಾಡಿಕೊಳ್ಳುವ ಮೊದಲು ಶೈಕ್ಷಣಿಕ ಅರ್ಹತೆ, ವಿವಿಧ ವರ್ಗಗಳ ಸೀಟುಗಳಿಗೆ ನಿಗದಿಪಡಿಸಿರುವ ಅರ್ಹತಾ ಮಾನದಂಡಗಳು ಮತ್ತು ಅಂತಹ ಸೀಟುಗಳಿಗೆ ನಿಗದಿಪಡಿಸಿರುವ ಅಭ್ಯರ್ಥಿಯ ಅರ್ಹತೆ ಹಾಗು ಇತ್ಯಾದಿ ಮಾನದಂಡಗಳನ್ನು ಓದಿಕೊಂಡು ನೊಂದಣಿ ಮಾಡಿಕೊಳ್ಳಲು ಸೂಚಿಸಿದೆ.

ಕರ್ನಾಟಕೇತರ ಅಭ್ಯರ್ಥಿಗಳಿಗೆ ಮಾಹಿತಿ

ಕರ್ನಾಟಕೇತರ ಅಭ್ಯರ್ಥಿಗಳು, ಯುಜಿನೀಟ್ 2024 ರಲ್ಲಿ ಅರ್ಹತೆಯನ್ನು ಪಡೆದಿದ್ದರೆ, ವೈದ್ಯಕೀಯ / ದಂತ ವೈದ್ಯಕೀಯ ಆಯುರ್ವೇದ, **ಯುನಾನಿ, ಹೋಮಿಯೋಪತಿ** ಕೋರ್ಸುಗಳ ಪ್ರವೇಶಾತಿಗಾಗಿ, ಅಭ್ಯರ್ಥಿಗಳು ಮೊದಲು ಕೆಇಎ ವೆಬ್‌ಪೋರ್ಟಲ್ ನಲ್ಲಿ ನೊಂದಣಿ ಮಾಡಿ, ಶುಲ್ಕವನ್ನು ಪಾವತಿಸಬೇಕು. ನಂತರ 12ನೇ ತರಗತಿಯ ಅಂಕಗಳನ್ನು ಕೆಇಎ **ಪೋರ್ಟಲ್** ನಲ್ಲಿ ದಾಖಲಿಸಿ ಅಂಕಪಟ್ಟಿಯನ್ನು upload ಮಾಡಬೇಕು. ದಾಖಲೆಗಳ ಪರಿಶೀಲನೆಗೆ ಹಾಜರಾಗುವ **ಅವಶ್ಯಕತೆ** ಇರುವುದಿಲ್ಲ.

ಆದರೆ OCI / PIO / NRI / Foreign Nationals ಅಭ್ಯರ್ಥಿಗಳು, ಕರ್ನಾಟಕೇತರ ಅಭ್ಯರ್ಥಿಗಳು Religious Minority or NRI Ward seats ಸೀಟುಗಳನ್ನು ಅಥವಾ St. John Medical College, Bangalore, (Category-2 to Category-8 ) ನಲ್ಲಿ ನಿರ್ದಿಷ್ಟ ಸೀಟುಗಳನ್ನು ಪಡೆಯಲು ಅರ್ಹರಿದ್ದಲ್ಲಿ, ಅಂತಹ ಅಭ್ಯರ್ಥಿಗಳು ಮಾತ್ರ ನಿಗದಿತ ದಿನಾಂಕಗಳಂದು ದಾಖಲಾತಿ ಪರಿಶೀಲನೆಗೆ ಹಾಜರಾಗಬೇಕು.

ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಗೆ ಭೇಟಿ ನೀಡಲು ಸೂಚಿಸಿದೆ.

ಕಾರ್ಯನಿರ್ವಾಹಕ ನಿರ್ದೇಶಕರು.

ಗಮನಿಸಿ: ಎನ್‌ಎಮ್‌ಸಿ ಅವರ ಸೂಚನೆ ದಿನಾಂಕ 24-07-2023 ರ ಅನ್ವಯ ಸ್ಟ್ರೇ ವೇಕೆನ್ಸಿ ಸುತ್ತಿನ ಸೀಟು ಹಂಚಿಕೆ ಸೇರಿದಂತೆ ಎಲ್ಲಾ ಸುತ್ತಿನ ಸೀಟು ಹಂಚಿಕೆಯನ್ನು ಆನ್‌ಲೈನ್ ಮೂಲಕ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದಲೇ ನಡೆಸಲಾಗುವುದರಿಂದ, ಯುಜಿ ನೀಟ್ 2024 ರಲ್ಲಿ ಅರ್ಹತೆ ಪಡೆದ ಎಲ್ಲಾ ಅಭ್ಯರ್ಥಿಗಳು ಕರ್ನಾಟಕ ರಾಜ್ಯದಲ್ಲಿನ ವೈದ್ಯಕೀಯ / ದಂತ ವೈದ್ಯಕೀಯ ಕೋರ್ಸುಗಳಿಗೆ ಪ್ರವೇಶ ಪಡೆಯಲು ಅರ್ಹರಾಗಲು ಕೆಇಎ ನಲ್ಲಿ ಆನ್‌ಲೈನ್ ಮೂಲಕ ನೊಂದಾಯಿಸಿ, ದಾಖಲೆಗಳ ಪರಿಶೀಲನಾ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸೂಚಿಸಿದೆ. (ಭಾರತ ಸರ್ಕಾರದ ಸೂಚನೆಗಳ ಅನ್ವಯ)